ಕರ್ನಾಟಕ ಸರ್ಕಾರ

ಅರಣ್ಯ ಇಲಾಖೆ

**ಪ್ರಕಟಣೆ**

**ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮೈಸೂರು ವೃತ್ತ, ಮೈಸೂರು**

**ಸಂಖ್ಯೆ: ಎ2-ಸಿಬ್ಬಂದಿ-ನೇಮಕಾತಿ-ಸಿಆರ್-18/2011-12 ದಿನಾಂಕ 27-06-2011**

**ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ**

****

ಮೈಸೂರು ಅರಣ್ಯ ವೃತ್ತದ ಹುಣಸೂರು ವನ್ಯಜೀವಿ ವಿಭಾಗದಲ್ಲಿ 84 ಸಂಖ್ಯೆಯ ಅರಣ್ಯ ವೀಕ್ಷಕ ಹುದ್ದೆಗಳಿಗೆ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003 ರಂತೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಈ ಕಚೇರಿಯಲ್ಲಿ ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಹಾಗೂ ಸಮಯದೊಳಗೆ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಅನುಬಂಧ-1 ರಲ್ಲಿ ತಯಾರಿಸಲಾಗಿದೆ ಹಾಗೂ ನ್ಯೂನತೆ, ಅಪೂರ್ಣ ಮಾಹಿತಿಗಳಿಂದ ಕೂಡಿದ ಹಾಗೂ ಇನ್ನಿತರ ಕಾರಣಗಳಿಗಾಗಿ ತಿರಸ್ಕೃತಗೊಂಡ ಅಭ್ಯರ್ಥಿಗಳ ಪಟ್ಟಿಯನ್ನು ಅನುಬಂಧ-2 ರಲ್ಲಿ ತಯಾರಿಸಲಾಗಿದೆ.

ಅನುಬಂಧ-1 ಮತ್ತು ಅನುಬಂಧ-2ರ ಪಟ್ಟಿಗಳನ್ನು ಕರ್ನಾಟಕ ಅರಣ್ಯ ಇಲಾಖೆಯ Website: www.karnatakaforest.gov.in ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಈ ಮಾಹಿತಿಯನ್ನು ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮೈಸೂರು ವೃತ್ತ, ಮೈಸೂರು ಇವರ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿರುತ್ತದೆ.

ಈ ಕುರಿತು ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪೈಕಿ ಯಾರಿಗಾದರೂ, ಏನಾದರೂ ತಕರಾರು ಅಥವಾ ಆಕ್ಷೇಪಣೆ ಇದ್ದಲ್ಲಿ ಅಭ್ಯರ್ಥಿಗಳು ತಮ್ಮ ಆಕ್ಷೇಪಣೆಯನ್ನು ಲಿಖಿತ ರೂಪದಲ್ಲಿ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮೈಸೂರು ವೃತ್ತ, ಮೈಸೂರು ಇವರಿಗೆ ದಿನಾಂಕ 05-09-2011ರ ಅಪರಾಹ್ನ 4.30 ಗಂಟೆಯೊಳಗಾಗಿ ಪೂರ್ಣ ದಾಖಲೆಗಳೊಂದಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ಮೈಸೂರು,**
**ದಿನಾಂಕ: 24-08-2011**

**ಅರಣ್ಯ ಸಂರಕ್ಷಣಾಧಿಕಾರಿ**
**ಮತ್ತು ಆಯ್ಕೆ ಪ್ರಾಧಿಕಾರ,**
**ಮೈಸೂರು ವೃತ್ತ, ಮೈಸೂರು.**